# ಸಹಾಯಕ ಆಯುಕ್ತರ ನ್ಯಾಯಾಲಯ, ಬಳ್ಳಾರಿ

ಸಂ: ಕಂದಾಯ/ಅಪೀಲು/313/13-14 ದಿನಾಂಕ :25-10-2016

ಉಪಸ್ಥಿತರು: ಶ್ರೀ ಲೋಕೇಶ್ ಪಿ.ಎನ್ (ಕ.ಆ.ಸೇ)

ಸಹಾಯಕ ಆಯುಕ್ತರು, ಬಳ್ಳಾರಿ.

| ವಾದಿಗಳು | ಪ್ರತಿವಾದಿಗಳು |
|---|---|
| 1.ಶ್ರೀ ಎಂ. ರಾಘವೇಂದ್ರ ತಂದೆ ಮಾರುತಿ, ಪಾರ್ವತಿನಗರ, ಸಿರುಗುಪ್ಪ<br>(ಶ್ರೀ ಕೆ. ಮಹಮದ್ ರಫೀಕ್, ವಕೀಲರು, ಬಳ್ಳಾರಿ) | (1) ತಹಶೀಲ್ದಾರರು, ಸಿರುಗುಪ್ಪ<br>(2) ಕಂದಾಯ ನಿರೀಕ್ಷಕರು, ತೆಕ್ಕಲಕೋಟೆ |

ದಾವಾ ಜಮೀನಿನ ವಿವರ :-

| ತಾಲ್ಲೂಕು | ಗ್ರಾಮ | ಸ. ನಂ. | ವಿಸ್ತೀರ್ಣ (ಎಕರೆಗಳಲ್ಲಿ) |
|---|---|---|---|
| ಸಿರುಗುಪ್ಪ | ದೇವಲಾಪುರ | 114/A | 0.06.00 |

--@@@--

ವಾದಿಯು ಅವರ ವಕೀಲರ ಮುಖಾಂತರ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(2) ರಡಿಯಲ್ಲಿ ಕಂದಾಯ ನಿರೀಕ್ಷಕರು, ತೆಕ್ಕಲಕೋಟೆ ಇವರ ಎಂ ಆರ್ ನಂ H73/11-12 ದಿನಾಂಕ 25/05/2012 ರ ಆದೇಶದ ವಿರುದ್ಧ ಈ ನ್ಯಾಯಾಲಯಕ್ಕೆ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮೇಲ್ಮನವಿಯನ್ನು ದಾಖಲಿಸಿಕೊಳ್ಳಲಾಗಿರುತ್ತದೆ. ನೈಸರ್ಗಿಕ ನ್ಯಾಯ ದೃಷ್ಠಿಯಿಂದ ಉಭಯ ಪಕ್ಷಗಾರರಿಗೂ ನೋಟೀಸಗಳನ್ನು ಕಳುಹಿಸಿ ದಿನಾಂಕ: 28.01.2014, 07.04.2015, 07.06.2016,08.09.2016,25.10.2016ಗಳಂದು ಪ್ರಕರಣದ ವಿಚಾರಣೆಯನ್ನು ಕೈಗೊಳ್ಳಲಾಗಿರುತ್ತದೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ವಾದಿಗಳು ಈ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಿ, ಸಿರುಗುಪ್ಪ ತಾಲ್ಲೂಕಿನ ದೇವಲಾಪುರ ಗ್ರಾಮದ ಸ.ನಂ 114/A ವಿಸ್ತೀರ್ಣ: 0.06.00 ಎಕರೆ ಜಮೀನನ್ನು ಶ್ರೀ ಬಿ.ಕಿರಣ್ ಕುಮಾರ್,ಇವರಿಂದ ಸಿರುಗುಪ್ಪ ಇವರಿಂದ ನೊಂದಾಯಿತ ಕ್ರಯ ಪತ್ರ ಸಂಖ್ಯೆ 6256/2011-12 ದಿನಾಂಕ:10.02.2011 ರಲ್ಲಿ ಜಮೀನನ್ನು ಕ್ರಯಕ್ಕೆ ಪಡೆದಿರುತ್ತಾರೆ. ಸದರಿ ಜಮೀನಿನ ಹಕ್ಕು ಬದಲಾವಣೆ ಕೋರಿ ಅರ್ಜಿ ಸಲ್ಲಿಸಲಾಗಿ ಕಂದಾಯ ನಿರೀಕ್ಷಕರು, ತೆಕ್ಕಲಕೋಟೆ ಇವರ ಎಂ ಆರ್ ನಂ H73/11-12 ದಿನಾಂಕ 25/04/2012 ರಲ್ಲಿ ಸದರಿ ಜಮೀನು ತುಂಡು ಭೂಮಿಯಾಗಿರುವುದರಿಂದ ಸದರಿ ವಹಿವಾಟು ಗೈರು ಮಂಜೂರು ಮಾಡಿರುವುದರ ವಿರುದ್ಧ ಮೇಲ್ಮನವಿಯನ್ನು ಸಲ್ಲಿಸುತ್ತಾ, ಕ್ರಯಪತ್ರದಂತೆ ವಾದಿಯ ಹೆಸರಿಗೆ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ವಾದಿಗಳು ಮೇಲ್ಮನಯೊಂದಿಗೆ ಈ ನ್ಯಾಯಾಲಯಕ್ಕೆ ಸಲ್ಲಿಸಿದ ದಾಖಲೆಗಳನ್ನು ಹಾಗೂ ಪ್ರಶ್ನಿತ ಎಂ ಆರ್ ನಂ H73/11-12 ದಿನಾಂಕ 25/04/2012 ನ್ನು ಪರಿಶೀಲಿಸಲಾಗಿ ಕರ್ನಾಟಕ ಭೂಕಂದಾಯ ಕಾಯ್ದೆಕಲಂ 95 ನ್ನು ಉಲ್ಲಂಘಿಸಿ, ತುಂಡು ಜಮೀನು ಖರೀದಿ ಮಾಡಿರುವುರಿಂದ ತಿರಸ್ಕರಿಸಿದ್ದು,ಸಮಂಜಸವಾಗಿರುತ್ತದೆ. ಈ ಕೆಳಕಂಡಂತೆ ಆದೇಶ.

## :: ಆದೇಶ ::

ವಾದಿಯ ಮೇಲ್ಮನವಿಯನ್ನು ವಜಾಗೊಳಸಿದೆ.

ಪೀಠಿಕೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ ಸಿರುಗುಪ್ಪ ತಾಲ್ಲೂಕಿನ ದೇವಲಾಪುರ ಗ್ರಾಮದ ಸ.ನಂ 114/A ವಿಸ್ತೀರ್ಣ: 0.06.00 ಎಕರೆ ಜಮೀನಿಗೆ ಸಂಬಂಧಿಸಿದಂತೆ ವಾದಿಗಳು ತುಂಡು ಜಮೀನು ಖರೀದಿಸಿದ್ದು, ಕರ್ನಾಟಕ ಭೂಕಂದಾಯ ಕಾಯ್ದೆಕಲಂ 95 ನ್ನು ಉಲ್ಲಂಘನೆಯಾಗಿರುವುದು ಕಂಡುಬಂದಿರುತ್ತದೆ. ವಾದಿಯ ಮೇಲ್ಮನವಿಯನ್ನು ಈ ಹಂತದಲ್ಲಿಯೇ ವಜಾಗೊಳಸಿ ಆದೇಶಿಸಿದೆ.

ಈ ಆದೇಶವನ್ನು ಹೇಳಿ, ಬರೆಯಿಸಿ ತಪ್ಪುಗಳನ್ನು ತಿದ್ದಿ ದಿನಾಂಕ: 25.10.2016 ರಂದು ಬಹಿರಂಗ ನ್ಯಾಯಾಲಯದಲ್ಲಿ ಘೋಷಿಸಲಾಗಿದೆ.

ಸಹಾಯಕ ಆಯುಕ್ತರು,
ಬಳ್ಳಾರಿ